ಪ್ರಧಾನ ಸಿವ್ಹಿಲ್ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ
ನ್ಯಾಯಾಲಯ ಯಾದಗಿರಿ.
ಸಿ.ಸಿ. ನಂಃ **503/2019**

ಫಿರ್ಯಾಧಿದಾರಃ ಕರ್ನಾಟಕ ಸರ್ಕಾರದ ಪರವಾಗಿ
ಗುರುಮಿಠಕಲ್ ಪೊಲೀಸ್ ಠಾಣೆ

// ವಿರುದ್ಧ //

ಆರೋಪಿತ ಃ ನರಸಪ್ಪ ತಂದೆ ಹಣಮಂತ ನಕ್ಕಾ,
ವಃ **45** ವರ್ಷ, ಸಾಃ ಯಡೇಪಲ್ಲಿ ಗ್ರಾಮ,
ತಾಃ ಗುರುಮಠಕಲ್, ಜಿಃ ಯಾದಗಿರಿ.

ದೋಷಾರೋಪಣೆ

ನಾನು ಅರುಣ ಚೌಗುಲೆ ಬಿ.ಎ.,ಎಲ್.ಎಲ್.ಬಿ.,(Honors) ಸಿವಿಲ್ ನ್ಯಾಯಾಧೀಶರು ಹಾಗೂ ಪ್ರ.ದ.ನ್ಯಾ.ದಂ.ಗಳು ಯಾದಗಿರಿ, ಈ ಕೆಳಕಂಡ ಆರೋಪಿತರು ಆದ ನಿಮ್ಮ ಮೇಲೆ ಈ ಮೂಲಕ ಕೆಳಕಂಡಂತೆ ಆರೋಪಕ್ಕೆ ಗುರಿಪಡಿಸುತ್ತೇನೆ.

1. ದಿನಾಂಕ 25.05.2018 ರಂದು ಬೆಳಿಗ್ಗೆ 07.00 ಗಂಟೆ ಸುಮಾರಿಗೆ ಗುರುಮಿಠಕಲ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಬರುವ ಯಡೇಪಲ್ಲಿ ಗ್ರಾಮದಲ್ಲಿ ಆರೋಪಿತನಾದ ನೀವು ಎದ್ದು ಮನೆಯಲ್ಲಿ ಇಟ್ಟಿದ್ದ ಹಣ ತೆಗೆದುಕೊಂಡು ಹೋಗಿ ಕುಡಿದು ಬಂದು ಮುಂಜಾನೆ 08.30 ಗಂಟೆ ಸುಮಾರಿಗೆ ಪುನಃ ಕುಡಿಯಲು ಹಣ ಕೊಡಲೆ ಸೂಳಿ, ರಂಡಿ ಅಂತಾ ಚಾಸಾ-1 ಶ್ರೀಮತಿ ಬಸಲಿಂಗಮ್ಮ ರವರಿಗೆ ಅವಾಚ್ಯ ಶಬ್ದಗಳಿಂದ ಬೈದಿರುತ್ತೀರಿ. ಈ ಮೂಲಕ ಆರೋಪಿತನಾದ ನೀವು ಭಾ.ದಂ.ಸಂ. ಕಲಂ 504 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುವಿರಿ.

2. ಈ ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಮತ್ತು ಸಂದರ್ಭದಲ್ಲಿ ಆರೋಪಿತನಾದ ನೀವು ಚಾಸಾ-1 ರವರ ತಲೆಯ ಕೂದಲು ಹಿಡಿದು ಬೆನ್ನಿಗೆ ಹೊಡೆದಿರುತ್ತೀರಿ. ಈ ಮೂಲಕ ಆರೋಪಿತನಾದ ನೀವು ಭಾ.ದಂ.ಸಂ.ಕಲಂ.323 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

3. ಈ ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಮತ್ತು ಸಂದರ್ಭದಲ್ಲಿ ಚಾಸಾ-1 ರವರು ಕೂಲಿ ಮಾಡಿದ ದುಡ್ಡು ಕುಡಿದರೆ ಸಂಸಾರ ಮಾಡುವುದು ಹೇಗೆ ಅಂತಾ ಕೇಳಿದ್ದಕ್ಕೆ ಆರೋಪಿತನಾದ ನೀವು ಅಂಗಳದಲ್ಲಿದ್ದ ಕಟ್ಟಿಗೆ ತೆಗೆದುಕೊಂಡು ಚಾಸಾ-1 ರವರ ಬಲಗಾಲಿಗೆ ಹೊಡೆದಿರುತ್ತೀರಿ.

ಈ ಮೂಲಕ ಆರೋಪಿತನಾದ ನೀವು ಭಾ.ದಂ.ಸಂ.ಕಲಂ.324 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

4. ಈ ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಮತ್ತು ಸಂದರ್ಭದಲ್ಲಿ ಆರೋಪಿತನಾದ ನೀವು ಚಾಸಾ-1 ರವರ ತಲೆಯ ಕೂದಲು ಹಿಡಿದು ಬೆನ್ನಿಗೆ ಹೊಡೆದು ಮತ್ತು ಕಟ್ಟಿಗೆ ತೆಗೆದುಕೊಂಡು ಚಾಸಾ-1 ರವರ ಬಲಗಾಲಿಗೆ ಹೊಡೆದು ದೈಹಿಕ ಹಿಂಸೆ ನೀಡಿರುತ್ತೀರಿ. ಈ ಮೂಲಕ ಆರೋಪಿತನಾದ ನೀವು ಭಾ.ದಂ.ಸಂ.ಕಲಂ.498(ಎ) ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

5. ಈ ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಮತ್ತು ಸಂದರ್ಭದಲ್ಲಿ ಆರೋಪಿತನಾದ ನೀವು ಚಾಸಾ-1 ರವರಿಗೆ ಏ ಸೂಳೆ ನಾನು ಕೇಳಿದಾಗ ರೊಕ್ಕ ಕೊಡಲಿಲ್ಲ ಅಂದರೆ ನಿನಗೆ ಖಲಾಸ ಮಾಡುತ್ತೇನೆ ಅಂತಾ ಜೀವದ ಬೆದರಿಕೆ ಹಾಕಿರುತ್ತೀರಿ. ಈ ಮೂಲಕ ಆರೋಪಿತನಾದ ನೀನು ಭಾ.ದಂ.ಸಂ.ಕಲಂ.506 ರಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞಾನದೊಳಗೆ ಮಾಡಿರುತ್ತೀರಿ.

<u>ಆರೋಪಿತನ ಹೇಳಿಕೆ</u>

ಪ್ರಶ್ನೆ-1ಃ ಮೇಲೆ ಓದಿ ಹೇಳಿದ ಆಪಾದನೆ/ದೋಷಾರೋಪಣೆ
ತಿಳಿಯಿತೆ ಅಥವಾ ಅರ್ಥವಾಯಿತೇ?

ಉತ್ತರಃ

ಪ್ರಶ್ನೆ-2ಃ ನೀವು ತಪ್ಪೊಪ್ಪಿಕೊಳ್ಳುವಿರಾ ಅಥವಾ ವಿಚಾರಣೆಯಾಗ
ಬಯಸುವಿರಾ?

ಉತ್ತರಃ

(ಮೇಲ್ಕಾಣಿಸಿದ ದೋಷಾರೋಪಣೆಯನ್ನು ನನ್ನ ಉಕ್ತಲೇಖನದಂತೆ ಗಣಕಯಂತ್ರದಲ್ಲಿ ಬೆರಳಚ್ಚು ಮಾಡಿಸಿ ತೆರೆದ ನ್ಯಾಯಾಲಯದಲ್ಲಿ ದೋಷಾರೋಪಣೆಯನ್ನು ಆರೋಪಿತನಿಗೆ ತಿಳಿಯುವ ಭಾಷೆಯಲ್ಲಿ ಓದಿ ಹೇಳಲಾಯಿತು.)

ದಿನಾಂಕಃ 22.04.2026

ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂ.ಗಳು, ಯಾದಗಿರಿ.